Crl.Mis.-42/2020

PW-1

ದಿನಾಂಕಃ 15.02.2025 ರಂದು ಸಾಕ್ಷಿಯನ್ನು ಕರೆದು ಪ್ರಮಾಣವಚನ ಭೋಧಿಸಲಾಯಿತು.

ಪಾಟೀ ಸವಾಲುಃ- ಎದುರುದಾರರ ಪರ ಶ್ರೀ.ಎಸ್ ಎನ್ ಪಿ ಪರವಾಗಿ ಸಿ ಆರ್ ವಕೀಲರಿಂದಃ-

ನಾನ್ನ ಮದುವೆ ಯಾವ ವರ್ಷ ಆಗಿರುತ್ತದೆ ಎಂದರೆ ಸಾಕ್ಷಿಯು ಸುಮಾರು 30 ವರ್ಷಗಳ ಹಿಂದೆ ಎಂದು ನುಡಿಯುತ್ತಾರೆ. ನನ್ನ ಮುಖ್ಯ ವಿಚಾರಣೆಯ ಪ್ರಮಾಣ ಪತ್ರದಲ್ಲಿರುವ ಅಂಶಗಳು ಗೊತ್ತಿದೆಯಾ ಎಂದರೆ ಸಾಕ್ಷಿ ನಾನು ಓದಿಲ್ಲ ಎಂದು ನುಡಿಯುತ್ತಾರೆ. ಎದುರುದಾರರಿಗೆ ಜಮೀನು ಇದ್ದು ಹಾಗೂ ಬೋರ್ ವೆಲ್ ಹಾಕಿಸಿ ಬೆಳೆ ಬೆಳೆಯುತ್ತಿದ್ದಾರೆ ಎಂದು ತೋರಿಸಲು ಸಂಬಂಧಪಟ್ಟ ದಾಖಲೆಗಳನ್ನು ನ್ಯಾಯಾಲಯಕೆ ಹಾಜರುಪಡಿಸಿದ್ದೀರಾ ಎಂದರೆ ಸಾಕ್ಷಿ ಹೌದು ಎಂದು ನುಡಿಯುತ್ತಾರೆ. ಮದುವೆಯಾದ ಹೊಸದರಲ್ಲಿ ಎದುರುದಾರರು ನನ್ನ ಜೊತೆ ಅನ್ಯೋನ್ಯವಾಗಿದ್ದರಾ ಎಂದರೆ ಸಾಕ್ಷಿ ಹೌದು ಎಂದು ನುಡಿಯುತ್ತಾರೆ. ಮದುವೆಯಾದ ನಂತರ ಒಟ್ಟು ಕುಟುಂಬದಲ್ಲಿ ವಾಸ ಮಾಡುತ್ತಿದ್ದರಾ ಅಥವಾ ಬೇರೆ ವಾಸ ಮಾಡುತ್ತಿದ್ದರಾ ಎಂದರೆ ಸಾಕ್ಷಿ ಒಟ್ಟು ಕುಟುಂಬದಲ್ಲಿ ವಾಸ ಮಾಡುತ್ತಿದ್ದೆವು ಎಂದು ನುಡಿಯುತ್ತಾರೆ.

ಮುಂದುವರೆದ ಪಾಟೀ ಸವಾಲಿಗೆ ಕಾಲಾವಕಾಶ ಕೋರಿದ್ದು, ಕಾಲಾವಕಾಶ ನೀಡಲಾಯಿತು.

ಸಾ. ಹೇ. ತೆ. ನ್ಯಾ. ಬೆ. ಮಾಡಿಸಲಾಯಿತು.

ಓ. ಹೇ. ಕೇ. ಸ. ಇದೆ.

ಹೆಚ್ಚುವರಿ ಸಿವಿಲ್ ನ್ಯಾಯಾಧೀಶರು ಮತ್ತು
ಜೆ.ಎಂ.ಎಫ್.ಸಿ., ಹೊನ್ನಾಳಿ.